**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.315/2021**

ಪಿ.ಡಬ್ಲ್ಯೂ: **5**

ಸಿ.ಡಬ್ಲ್ಯೂ: 12

| | | |
|---|---|---|
| ಹೆಸರು | : | ಮೇಘ ಟಿ ಎನ್ |
| ಗಂಡನ ಹೆಸರು | : | ನಾಗರಾಜ್ ಹನುವಾಗನ್ |
| ವಯಸ್ಸು | : | 32 ವರ್ಷ |
| ಉದ್ಯೋಗ | : | ರಾಜ್ಯ ಗುಪ್ತ ವಾರ್ತ ಘಟಕ |
| ವಾಸಸ್ಥಳ | : | ಚಿತ್ರದುರ್ಗ |

**ದಿನಾಂಕ: 07-07-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ಸ.ಸ.ಅ. ರವರಿಂದ.**

ನಾನು ದಿ:**08-01-2021** ರಿಂದ **19-01-2022** ರವರೆಗೆ ಲಕ್ಕವಳ್ಳಿ **ಪೋಲೀಸ್ ಠಾಣೆಯಲ್ಲಿ** ಪಿ ಎಸ್ ಐ **ಆಗಿ ಕರ್ತವ್ಯ** ನಿರ್ವಹಿಸಿರುತ್ತೇನೆ.

ದಿನಾಂಕ: 06-07-2020 ರಂದು ಚಾಸಾ-4 ರವರು ನೀಡಿದ ವರದಿಯನ್ನು ಸ್ವೀಕರಿಸಿ, ನಂತರ ಈ ಪ್ರಕರಣದಲ್ಲಿ ಆರೋಪಿಯ ಮೇಲೆ ಆರೋಪ ಸಾಬೀತಾದ ಕಾರಣ ಆರೋಪಿಯ ವಿರುದ್ಧ ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸಹಾಯಕ ಕಾರ್ಯಪಾಲಕರು, ಇಂಜಿನಿಯರ್ ರವರು ನೀಡಿದ ವರದಿ ಆಗಿದ್ದು, ಸದರಿ ದಾಖಲೆಯನ್ನು ನಿಪಿ-12 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು : ಆರೋಪಿತರ ಪರ** ಶ್ರೀ ಕೆಪಿ **ವಕೀಲರಿಂದ.**

ನೀವು 06-07-2020 ರಂದು ಚಾಸಾ-4 ರವರಿಂದ ಯಾವುದೇ ವರದಿಯನ್ನು ಸ್ವೀಕರಿಸಿರುವುದಿಲ್ಲ, ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದಿರಾ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಸಹ ನಿಮ್ಮ ಠಾಣಾ ಅಂಕಿ ಅಂಶಗಳಿಗೋಸ್ಕರ ಸುಳ್ಳು ದೋಷರೋಪಣಾ ಪಟ್ಟಿಯನ್ನುಸಲ್ಲಿಸಿರುತ್ತಿರಾ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ</u>** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾ.ದಂ. ರವರು, ತರೀಕೆರೆ.**